# ಕರ್ನಾಟಕ ಸರ್ಕಾರ

**ಸಂಖ್ಯೆ:** ಕಾಇ 292 ಎಲ್ಇಟಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:04/06/2022

**ಇವರಿಂದ:**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ,
ವಿಕಾಸಸೌಧ, ಬೆಂಗಳೂರು.

**ಇವರಿಗೆ:**
ಆಯುಕ್ತರು,
ಕಾರ್ಮಿಕ ಇಲಾಖೆ, ಕಾರ್ಮಿಕ ಭವನ,
ಬನ್ನೇರುಘಟ್ಟ ರಸ್ತೆ, ಬೆಂಗಳೂರು.

ಮಾನ್ಯರೇ,

**ವಿಷಯ** :- ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ 2022-23ನೇ ಸಾಲಿನ ಕ್ರಿಯಾ ಯೋಜನೆ (Action Plan)ಯನ್ನು ಅನುಮೋದಿಸುವ ಬಗ್ಗೆ.

**ಉಲ್ಲೇಖ** :- ತಮ್ಮ ಕಛೇರಿಯ ಪತ್ರ ಸಂಖ್ಯೆ: ಅಸಂಕಾ/ಲೆಕ್ಕಪತ್ರ/ಕ್ರಿ.ಯೋ/ಸಿ.ಆರ್-04/2022-23, ದಿನಾಂಕ: 18/05/2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ಹಂಚಿಕೆಯಾದ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ ಅನುಮೋದನೆಗಾಗಿ ಉಲ್ಲೇಖಿತ ಪ್ರಸ್ತಾವನೆಯಲ್ಲಿ ಕೋರಿರುತ್ತೀರಿ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಷರತ್ತಿಗೊಳಪಟ್ಟು ಕ್ರಿಯಾ ಯೋಜನೆಯನ್ನು ಅನುಮೋದಿಸಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

- ಪ್ರಸ್ತಾಪಿತ ಕ್ರಿಯಾ ಯೋಜನೆಯು ಒದಗಿಸಿರುವ ಆಯವ್ಯಯದ ಮಿತಿಯನ್ನು ಮೀರಬಾರದು.
- ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಕೈಗೊಳ್ಳುವ ಕಾರ್ಯಕ್ರಮಗಳ ಕಾರ್ಯಚಟುವಟಿಕೆಗಳ ಪ್ರಗತಿಯ ವರದಿಯನ್ನು ತಪ್ಪದೇ ಪ್ರತಿ ತಿಂಗಳು ಸಲ್ಲಿಸಬೇಕು.
- ಕ್ರಿಯಾ ಯೋಜನೆಯಲ್ಲಿ ಏನಾದರೂ ಬದಲಾವಣೆಗಳನ್ನು ಮಾಡುವುದಾದಲ್ಲಿ ಕಡ್ಡಾಯವಾಗಿ ಸರ್ಕಾರದ ಪೂರ್ವಾನುಮತಿಯನ್ನು ಪಡೆಯಬೇಕು.
- ಪ್ರಸ್ತಾಪಿತ ಕ್ರಿಯಾ ಯೋಜನೆಯನ್ನು ಮುಂದಿನ ಮಂಡಳಿಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯತಕ್ಕದ್ದು.
- ಯೋಜನೆಗಳನ್ನು ಕೈಗೊಳ್ಳುವಾಗ ಟೆಂಡರ್ ಪ್ರಕ್ರಿಯೆ ಕೈಗೊಳ್ಳುವುದಿದ್ದಲ್ಲಿ ಕೆ.ಟಿ.ಪಿ.ಪಿ. ಕಾಯ್ದೆ, 2000ರ ನಿಯಮಗಳಿಗನುಸಾರವಾಗಿ ಕೈಗೊಳ್ಳತಕ್ಕದ್ದು.

..2

- ಆರ್ಥಿಕ ಇಲಾಖೆ ಕಾಲಕಾಲಕ್ಕೆ ಹೊರಡಿಸುವ ಆದೇಶ/ಟಿಪ್ಪಣಿಗಳಿಗೆ ಅನುಗುಣವಾಗಿ ಕ್ರಿಯಾ ಯೋಜನೆಯು ಇರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.
- ಆರ್ಥಿಕ ಇಲಾಖೆಯು ಹೊರಡಿಸುವ ಅಧಿಕಾರ ಪ್ರತ್ಯಾಯೋಜನೆಗನುಸಾರವಾಗಿ ಕ್ರಿಯಾ ಯೋಜನೆಯ ಅನುಷ್ಠಾನವನ್ನು ಕೈಗೊಳ್ಳತಕ್ಕದ್ದು.

(ಮಾನ್ಯ ಇಲಾಖಾ ಸಚಿವರಿಂದ ಅನುಮೋದಿಸಲ್ಪಟ್ಟಿದೆ)

ತಮ್ಮ ನಂಬುಗೆಯ,

(ಎಸ್. ಎಜಾಸ್ ಪಾಷ,) 4/6/2022
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

**ಪ್ರತಿಯನ್ನು:**

1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ, ಬೆಂಗಳೂರು.
4. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತ.

**ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ (ಲೆಕ್ಕ ಶೀರ್ಷಿಕೆ 2230-01-103-7-03) ಜಾರಿಗಾಗಿ 2022-23ನೇ ಸಾಲಿನ ಕ್ರಿಯಾ ಯೋಜನೆ**

## I. ಪ್ರಸ್ತಾವನೆ:

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಈ ಕೆಳಕಂಡ ಚಟುವಟಿಕೆಗಳನ್ನು ಹಮ್ಮಿಕೊಂಡಿರುತ್ತದೆ.

**(1) ಅಪಘಾತ ಪರಿಹಾರ ಸೌಲಭ್ಯ:-**

- ಕರ್ನಾಟಕ ರಾಜ್ಯದಲ್ಲಿ ಊರ್ಜಿತ ಚಾಲನ ಪರವಾನಗಿ ಪಡೆದ ಖಾಸಗಿ ವಾಣಿಜ್ಯ ವಾಹನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅಪಘಾತ ಪರಿಹಾರ ಸೌಲಭ್ಯ ಒದಗಿಸುವುದು.
- ಅಪಘಾತದಿಂದ ನಿಧನರಾದ ಪ್ರಕರಣದಲ್ಲಿ ರೂ.5 ಲಕ್ಷ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣದಲ್ಲಿ ರೂ.2 ಲಕ್ಷಗಳವರೆಗೆ ಪರಿಹಾರ ಹಾಗೂ ತಾತ್ಕಾಲಿಕ ದುರ್ಬಲತೆ ಪ್ರಕರಣಗಳಲ್ಲಿ ರೂ. 1 ಲಕ್ಷಗಳವರೆಗೆ ಆಸ್ಪತ್ರೆ ವೆಚ್ಚದ ಮರುಪಾವತಿಸುವುದು.

**(2) ಶೈಕ್ಷಣಿಕ ಧನಸಹಾಯ:-**

ಸರ್ಕಾರದ ಆದೇಶದನ್ವಯ, ಅಪಘಾತದಲ್ಲಿ ಮರಣ ಹೊಂದಿದ ಅಥವಾ ಸಂಪೂರ್ಣ ದುರ್ಬಲತೆ ಹೊಂದಿದ ಚಾಲಕರ ಮಕ್ಕಳ ವಿದ್ಯಾಭ್ಯಾಸ ಸ್ಥಗಿತಗೊಳ್ಳುವುದನ್ನು ತಡೆಹಿಡಿಯಲು ಹಾಗೂ ಮುಂದುವರೆಸಲು ಉತ್ತೇಜಿಸುವ ಉದ್ದೇಶದಿಂದ ಅಂತಹ ಚಾಲಕರ ಇಬ್ಬರು ಮಕ್ಕಳಿಗೆ 1 ನೇ ತರಗತಿಯಿಂದ ಪದವಿಪೂರ್ವ / 12ನೇ ತರಗತಿಯವರೆಗೆ ವ್ಯಾಸಂಗ ಮಾಡಲು ವಾರ್ಷಿಕ 10,000/- ರೂ.ನಂತೆ ಶೈಕ್ಷಣಿಕ ಧನಸಹಾಯ ನೀಡಲಾಗುತ್ತಿದೆ.

**(3) ಕಾರ್ಮಿಕರ ಸಮ್ಮಾನ ಪ್ರಶಸ್ತಿ ಹಾಗೂ ವಿಶೇಷ ಪುರಸ್ಕಾರ:-**

ಸರ್ಕಾರಿ ಆದೇಶ ಸಂಖ್ಯೆ: ಕಾಇ 149 ಎಲ್‌ಇಟಿ 2018 ಭಾಗ-1, ದಿನಾಂಕ:24-02-2020ರನ್ವಯ ಪ್ರತಿ ವರ್ಷ ಉತ್ತಮ ಹಾಗೂ ಸುರಕ್ಷಿತ ವಾಹನ ಚಾಲನೆ ಮಾಡಿದ ಚಾಲಕರನ್ನು ಗುರುತಿಸಿ, ಮಾರ್ಚ್ 1 ರಂದು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಆಚರಿಸುವ ಕಾರ್ಮಿಕ ಸಮ್ಮಾನ ದಿನದಂದು "ಶ್ರಮ ಸಮ್ಮಾನ ಪ್ರಶಸ್ತಿ" ನೀಡಿ ಗೌರವಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ರೂ. 1.00 ಲಕ್ಷಗಳ ಅನುದಾನ ಮಾತ್ರ ಹಂಚಿಕೆಯಾಗಿದ್ದು, ಹೆಚ್ಚುವರಿ ಅನುದಾನ ಬಿಡುಗಡೆಗೊಳಿಸಿದಲ್ಲಿ ಮಾತ್ರ ಕಾರ್ಮಿಕ ಸಮ್ಮಾನ ದಿನಾಚರಣೆಯನ್ನು ಆಚರಿಸಲು ಸಾಧ್ಯವಾಗಲಿದೆ.

**(4) ಅಪಘಾತ ಜೀವರಕ್ಷಕ ಕಾರ್ಯಕ್ರಮ :-**

ಅಪಘಾತಕ್ಕೀಡಾದ ಗಾಯಳುಗಳನ್ನು ರಕ್ಷಿಸಿ ತಕ್ಷಣವೇ ಪ್ರಥಮ ಚಿಕಿತ್ಸೆ ನೀಡಿ ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ನೀಡುವ ಮೂಲಕ ಜೀವರಕ್ಷಣೆ ಮಾಡುವ ಯೋಧರನ್ನು ಸಜ್ಜುಗೊಳಿಸಲು 2016-17ನೇ ಸಾಲಿನಿಂದ ಈ

ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ರೂ. 1.00 ಲಕ್ಷಗಳ ಅನುದಾನ ಮಾತ್ರ ಹಂಚಿಕೆಯಾಗಿರುವ ಕಾರಣ ಯಾವುದೇ ಗುರಿಯನ್ನು ನಿಗಧಿಪಡಿಸಿರುವುದಿಲ್ಲ.

**(5) ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳು: –**
ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಯಡಿ ದೊರಕುವ ಸೌಲಭ್ಯಗಳ ಕುರಿತು ಅಸಂಘಟಿತ ಕಾರ್ಮಿಕರಲ್ಲಿ ಅರಿವು ಮೂಡಿಸುವ ಸಲುವಾಗಿ ಕರಪತ್ರಗಳ ಮುದ್ರಣ, ಬ್ಯಾನರ್, ಹೋರ್ಡಿಂಗ್ಸ್‌ಗಳ ಅಳವಡಿಕೆ, ವೃತ್ತ ಪತ್ರಿಕೆಗಳಲ್ಲಿ ಜಾಹೀರಾತು, ಲಭ್ಯವಿರುವ ಎಲ್ಲಾ ಮಾಧ್ಯಮಗಳ ಮೂಲಕ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

## II. ಯೋಜನೆಗೆ ಆಯವ್ಯಯ:

2021–22ನೇ ಸಾಲಿನಲ್ಲಿ ಯೋಜನೆಯಡಿ ರೂ.1087.04 ಲಕ್ಷಗಳು ವೆಚ್ಚವಾಗಿದ್ದು, ಒಟ್ಟು 223 ಪ್ರಕರಣಗಳಲ್ಲಿ ರೂ.1060.07 ಲಕ್ಷಗಳ ಪರಿಹಾರವನ್ನು ಹಾಗೂ 255 ವಿದ್ಯಾರ್ಥಿಗಳಿಗೆ ರೂ. 25.50 ಲಕ್ಷಗಳ ಶೈಕ್ಷಣಿಕ ಸಹಾಯಧನವನ್ನು ವಿತರಿಸಲಾಗಿರುತ್ತದೆ. ಸದರಿ ಸಾಲಿನ ಅಂತ್ಯದಲ್ಲಿ ಪರಿಹಾರ ಪಾವತಿಗಾಗಿ ಒಟ್ಟು 140 ಪ್ರಕರಣಗಳು ಬಾಕಿ ಇದ್ದು, ಪ್ರಸಕ್ತ ಸಾಲಿನಲ್ಲಿ ಇನ್ನೂ ಹೆಚ್ಚಿನ ಪ್ರಕರಣಗಳು ಸ್ವೀಕೃತವಾಗುವ ಸಾಧ್ಯತೆಯಿರುತ್ತದೆ. 2022–23ನೇ ಸಾಲಿನಲ್ಲಿ ಈ ಯೋಜನೆಯಡಿ ಕೇವಲ ರೂ.1.00 ಲಕ್ಷಗಳನ್ನು ಹಂಚಿಕೆ ಮಾಡಿದ್ದು, ಯೋಜನೆಯ ಜಾರಿಗೆ ಹಿಂದಿನ ಸಾಲುಗಳಲ್ಲಿ ಬಿಡುಗಡೆಗೊಳಿಸಿದ ಅನುದಾನದಲ್ಲಿ ಬಾಕಿಯಿರುವ ಅನುದಾನದ ಮೊತ್ತ ಮತ್ತು ಬಡ್ಡಿಯ ಮೊತ್ತ ಸೇರಿ ಒಟ್ಟು ರೂ.518.48 ಲಕ್ಷಗಳು (ನೋಂದಣಿ ಶುಲ್ಕ ಹೊರತುಪಡಿಸಿ) ಯೋಜನೆಯ ಜಾರಿಗೆ ಲಭ್ಯವಿರುತ್ತದೆ. ಸದರಿ ಲಭ್ಯವಿರುವ ಮೊತ್ತವು ಸ್ವೀಕೃತವಾಗಬಹುದಾದ ಪ್ರಕರಣಗಳಿಗೆ ಪರಿಹಾರ ಪಾವತಿಸಲು ಕೊರತೆಯಾಗಲಿದ್ದು, ಹೆಚ್ಚಿನ ಅನುದಾನ ಅವಶ್ಯಕತೆಯಿರುತ್ತದೆ. ಆದಾಗ್ಯೂ ಲೆಕ್ಕ ಶೀರ್ಷಿಕೆ 2230–01–103–7–03ಯಡಿ ಲಭ್ಯವಿರುವ ಒಟ್ಟು ಅನುದಾನ ರೂ. 519.48 ಲಕ್ಷಗಳನ್ನು ಮೇಲಿನ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಈ ಕೆಳಕಂಡಂತೆ ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ. | ಉದ್ದೇಶ | ಒಟ್ಟು ಮೊತ್ತ | ಒಟ್ಟು ಮೊತ್ತದ ವಿಂಗಡಣೆ | ಅಂದಾಜು ಫಲಾನುಭವಿಗಳ ಸಂಖ್ಯೆ | ದರ | ಒಟ್ಟು ಮೊತ್ತ |
|---|---|---|---|---|---|---|
| 1. | ಮಂಡಳಿಯಿಂದ ನೇರವಾಗಿ ಅಪಘಾತ ಪರಿಹಾರ ಯೋಜನೆ. ಮರಣ ಪ್ರಕರಣಗಳಲ್ಲಿ – ರೂ.5 ಲಕ್ಷ, ಶಾಶ್ವತ ದುರ್ಬಲತೆ – ರೂ.2 ಲಕ್ಷ, ತಾತ್ಕಾಲಿಕ ದುರ್ಬಲತೆ ಮತ್ತು ಆಸ್ಪತ್ರೆ ವೆಚ್ಚ – ರೂ.1 ಲಕ್ಷದವರೆಗೆ | 450 | ಮರಣ ಪ್ರಕರಣದಲ್ಲಿ ನೀಡಬಹುದಾದ ಪರಿಹಾರ | 80 | 5 | 400 |
| | | | ಶಾಶ್ವತ ದುರ್ಬಲತೆ | 10 | 2 | 20 |
| | | | ತಾತ್ಕಾಲಿಕ ದುರ್ಬಲತೆ ಮತ್ತು ಆಸ್ಪತ್ರೆ ವೆಚ್ಚ | 30 | 1 | 30 |
| 2. | ಅಪಘಾತದಲ್ಲಿ ನಿಧನ ಹೊಂದಿದ ಅಥವಾ ಸಂಪೂರ್ಣ ದುರ್ಬಲತೆ ಹೊಂದಿದ ಚಾಲಕರ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿ ಯಿಂದ ಪದವಿ ಪೂರ್ವ/12ನೇ ತರಗತಿಯವರೆಗೆ ವ್ಯಾಸಂಗ | 30 | ಅಪಘಾತದಲ್ಲಿ ನಿಧನ ಹೊಂದಿದ ಅಥವಾ ಸಂಪೂರ್ಣ ದುರ್ಬಲತೆ ಹೊಂದಿದ ಚಾಲಕರ, ನಿರ್ವಾಹಕರ ಹಾಗೂ ಕ್ಲೀನರ್‌ಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿ ಯಿಂದ ಪದವಿ ಪೂರ್ವ/12ನೇ ತರಗತಿಯವರೆಗೆ ವಾರ್ಷಿಕ ರೂ. | 300 | 0.1 | 30 |

| | | | | | | |
|---|---|---|---|---|---|---|
| | ಮಾಡುತ್ತಿರುವ ವಾರ್ಷಿಕ ಶೈಕ್ಷಣಿಕ ಧನ ಸಹಾಯ | | 10,000/-ರಂತೆ ಶೈಕ್ಷಣಿಕ ಧನ ಸಹಾಯ | | | |
| 3. | ಚಾಲಕರಿಗೆ ಶ್ರಮ ಸಮ್ಮಾನ ಹಾಗೂ ವಿಶೇಷ ಪುರಸ್ಕಾರ ಪ್ರಶಸ್ತಿ | – | – | – | – | – |
| 4. | ಅಪಘಾತ ಜೀವರಕ್ಷಕ ಕಾರ್ಯಕ್ರಮ | – | – | – | – | – |
| 5. | ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳು | 39.48 | ಸಂವಹನ ಚಟುವಟಿಕೆಗಳಾದ ಮಾಧ್ಯಮಗಳಲ್ಲಿ ಜಾಹೀರಾತು, ಕರಪತ್ರ ಮುದ್ರಣ, ಬ್ಯಾನರ್‌ಗಳು, ಇತ್ಯಾದಿಗಳ ವೆಚ್ಚ, ತಾಂತ್ರಿಕ ಅಭಿವೃದ್ಧಿ ಹಾಗೂ ಇತರ ಆಡಳಿತಾತ್ಮಕ ವೆಚ್ಚ. | | | 39.48 |
| | **ಒಟ್ಟು ಮೊತ್ತ** | **519.48** | | | | **519.48** |

*****

S.K.

ಜಂಟಿ ಕಾರ್ಯದರ್ಶಿ

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ

ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು